ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಹುದ್ದೆಗಳ ಬಗ್ಗೆ

ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ):-

631(686) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಹಲವಾರು ವರ್ಷಗಳಿಂದಲೂ ನಿವೃತ್ತಿ, ಅಕಾಲಿಕ ಮರಣದಿಂದಾಗಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಶೈಕ್ಷಣಿಕ ಚಟುವಟಿಕೆಗಳು ಕುಂಟಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವುದಾದರೂ ತಾತ್ಕಾಲಿಕ ಅಥವಾ ಶಾಶ್ವತ ಪರಿಹಾರಗಳನ್ನು ಕೈಗೊಂಡಿದೆಯೇ ? (ಮಾಹಿತಿ ನೀಡುವುದು)